ಕರ್ನಾಟಕ ಸರ್ಕಾರ                                              ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.3802/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ದುರುಗಪ್ಪ** | | |
| **ತಂದೆ:ಹೆಸರು** | **ಮಲ್ಲಪ್ಪ** | **ಪಿಡಬ್ಲ್ಯೂ:** | **02** |
| **ವಯಸ್ಸು** | **34 ವರ್ಷ** | **ಸಿಡಬ್ಲ್ಯೂ:** | **03** |
| **ಉದ್ಯೋಗ:** | **ವ್ಯವಸಾಯ** | | |
| **ವಾಸ ಸ್ಥಳ:** | **ಸುಕಾಲಪೇಟೆ, ಸಿಂಧನೂರು.** | | |

**ದಿನಾಂಕ 13-08-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ ಸ ಅ ರವರಿಂದ**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ನಿಪಿ-1 & 2 ಸ್ಥಳ ಪಂಚನಾಮೆಗಳನ್ನು ತೋರಿಸಲಾಗಿ, ಸಾಕ್ಷಿಯು ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು, ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ-1 ಬಿ & 2 ಬಿ ಎಂದು ಗುರುತಿಸಲಾಯಿತು.

ನಾನು ಮನೆಗೆ ನಡೆದುಕೊಂಡು ಹೋಗುತ್ತಿದ್ದಾಗ ಪೋಲೀಸರು ಸಹಿ ಮಾಡಲು ಹೇಳಿದ್ದರು, ಆದ್ದರಿಂದ ಸಹಿ ಮಾಡಿದ್ದೆ. ನಿಪಿ-1 & 2 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-1 & 2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಸಾಕ್ಷಿದಾರರು 2 ಫೋಟೋಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಫೋಟೋಗಳನ್ನು ನಿಪಿ-3 & 4 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ**

ದಿಃ 08-08-2023 ರಂದು ಮ. 3 ರಿಂದ 4 ಗಂಟೆಗೆ ಸುಕಾಲಪೇಟೆಯಲ್ಲಿರುವ ಗುರುವಿನ ಮಠದವರಿಗೆ ಸಂಬಂಧಿಸಿದ ಮನೆಯಲ್ಲಿ ಚಾಸಾ-1 & ಆರೋಪಿಯ ನಡುವೆ ನಡೆದ ಜಗಳದ ವಿಚಾರವಾಗಿ ಪೋಲೀಸರು ಸ್ಥಳ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ.

ದಿಃ 08-08-2023 ರಂದು ಮ. 4-45 ರಿಂದ 5-45 ಗಂಟೆಗೆ ಚಾಸಾ-1 ರವರ ಗಂಡನ ಮನೆಯಲ್ಲಿ ಚಾಸಾ-1 & ಆರೋಪಿಯ ನಡುವೆ ನಡೆದ ಜಗಳದ ವಿಚಾರವಾಗಿ ಪೋಲೀಸರು ಸ್ಥಳ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ.

ನಿಪಿ-1 & 2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**